# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ನಂ.174 ಹೆಚ್.ಎಸ್.ಆರ್ ಬಡಾವಣೆ ವಾರ್ಡ್ ಸಮಿತಿ ಸಭೆಯ ನಡುವಳಿಗಳು

ಮಾನ್ಯ ನೋಡಲ್ ಅಧಿಕಾರಿ/ಜಂಟಿ ಆಯುಕ್ತರು (ಮಹದೇವಪುರ) ರವರು ದಿನಾಂಕ: 05.12.2020 ರಂದು ಬೆಳಿಗ್ಗೆ 11.00 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.174 ಹೆಚ್.ಎಸ್.ಆರ್ ಕಛೇರಿಯಲ್ಲಿ ನಡೆಸಿದ್ದು, ಸಭೆಯ ನಡವಳಿ ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| | ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು |
|---|---|
| 1. | ಶ್ರೀ ಆರ್. ವೆಂಕಟಚಾಲಪತಿ ಕ.ಆ.ಸೇ, ನೋಡಲ್ ಅಧಿಕಾರಿ ವಾ.ನಂ.174 ಹಾಗೂ ಜಂಟಿ ಆಯುಕ್ತರು (ಮಹದೇವಪುರ) ವಲಯ |
| 2. | ಶ್ರೀ ರವಿ.ಡಿ ಕಾರ್ಯದರ್ಶಿ, ಸಹಾಯಕ ಅಭಿಯಂತರರು |
| 3. | ಶ್ರೀ ಶೇಷಾದ್ರಿ ಕಾರ್ಯಪಾಲಕ ಅಭಿಯಂತರರು, ಬೊಮ್ಮನಹಳ್ಳಿ ವಿಭಾಗ/ಯೋಜನೆ ವಿಭಾಗ |
| 4. | ಶ್ರೀಮತಿ ಲಕ್ಷ್ಮಿ.ಬಿ, ಸಹಾಯಕ ಕಂದಾಯ ಅಧಿಕಾರಿ ಹೆಚ್.ಎಸ್.ಆರ್ ಬಡಾವಣೆ |
| 5. | ಶ್ರೀ ಸಾಯಿಬಣ್ಣ ಸಹಾಯಕ ಅಭಿಯಂತರರು (ಬಿಡಬ್ಲ್ಯೂಎಸ್ಎಸ್‌ಬಿ) |
| 6. | ಶ್ರೀ ನಂಜೇಶ್, ಎಂ.ಆರ್ ಕಿರಿಯ ಅಭಿಯಂತರರು, ಬೆಸ್ಕಾಂ |
| 7. | ಶ್ರೀ ಡಾ।। ಲೋಕೇಶ್, ಹಿರಿಯ ವೈಧ್ಯಾಧೀಕಾರಿಗಳು (ಪ್ರಾಥಮಿಕ ಆರೋಗ್ಯ ಕೇಂದ್ರ) ಅಗರ |
| 8. | ಶ್ರೀ ವಿನೋದ್, ಹಿರಿಯ ಆರೋಗ್ಯ ಪರಿವೀಕ್ಷಕರು |
| 9. | ಶ್ರೀ ಚಂದ್ರಶೇಖರ್ ಆರ್.ಡಬ್ಲ್ಯೂ.ಎ |
| 10. | ಶ್ರೀ ಬಿ.ಎನ್.ಆರ್ ರೆಡ್ಡಿ, ಆರ್.ಡಬ್ಲ್ಯೂ.ಎ |
| 11. | ಶ್ರೀ ಬಿ.ಎಂ. ರಮೇಶ್ ಆರ್.ಡಬ್ಲ್ಯೂ.ಎ |
| 12. | ಶ್ರೀ ರಾಮಚಂದ್ರ ಆರ್.ಡಬ್ಲ್ಯೂ.ಎ |
| 13. | ಶ್ರೀ ದೀಪ್ಯಾ ಆರ್.ಡಬ್ಲ್ಯೂ.ಎ |

ಮಾನ್ಯ ನೋಡಲ್ ಅಧಿಕಾರಿ/ಜಂಟಿ ಆಯುಕ್ತರು (ಮಹದೇವಪುರ) ರವರ ಸಮ್ಮುಖದಲ್ಲಿ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ/ಸಿಬ್ಬಂದಿ ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳಿಗೆ ಮತ್ತು ಸಾರ್ವಜನಿಕರಿಗೆ ಸ್ವಾಗತ ಕೋರುತ್ತಾ, ಸಭೆಯನ್ನು ಪ್ರಾರಂಭಿಸಲಾಯಿತು.

ಹಿಂದಿನ ಸಭಾ ನಡವಳಿಯ ಪ್ರತಿ ಅಂಶದ ಬಗ್ಗೆ ಚರ್ಚಿಸಿ ಇಂಜಿಯರಿಂಗ್, ಕೋವಿಡ್-19 ತಂಡಗಳು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿ ಸುಧಾರಣೆ ತಂದಿರುವುದನ್ನು ಗಮನಿಸಿದ್ದು, ಇನ್ನು ಉತ್ತಮ ರೀತಿಯಲ್ಲಿ ಮುಂದುವರೆಸಲು ನೋಡಲ್ ಅಧಿಕಾರಿಯವರು ತಿಳಿಸಿದರು.

Scanned with Car

| ಕ್ರ.ಸಂ | ಇಲಾಖೆ | ವಿಷಯ |
|---|---|---|
| 1 | ಬೀದಿ ದೀಪಗಳು (ವಿದ್ಯುತ್) | ಹಿಂದಿನ ಸಭೆಯಲ್ಲಿ ಸಹಾಯಕ ಅಭಿಯಂತರರು ವಿದ್ಯುತ್ ಗೈರು ಹಾಜರಾಗಿರುತ್ತಾರೆ. ಹಾಗೂ 6ನೇ ಸೆಕ್ಟರ್ ಉದ್ಯಾನವನದಲ್ಲಿ ದೀಪಗಳ ನಿರ್ವಹಣೆ ಮಾಡಲು ಮತ್ತು ಹೆಚ್.ಎಸ್.ಆರ್ ಬಡಾವಣೆ ವ್ಯಾಪ್ತಿಯಲ್ಲಿ ಸಾರ್ವಜನಿಕರ/ಸ್ಥಳೀಯರು ಬೀದಿ ದೀಪಗಳಿಗೆ ತಾವೇ ಕೊಕ್ಕೆ ಹಾಕಿಕೊಂಡು ಬೀದಿದೀಪ ನಿರ್ವಹಿಸುತ್ತಿದ್ದಾರೆ ಸಹಾಯಕ ಅಭಿಯಂತರರಿಗೆ ಟೈಮರ್ ಅಳವಡಿಸಲು ಸದಸ್ಯರು ಸೂಚಿಸಿದ್ದು, ಬೀದಿ ದೀಪಗಳ ನಿರ್ವಹಣೆಗೆ ಕ್ರಿಯಾಯೋಜನೆ ಸಿದ್ದಪಡಿಸಲು ಅಧ್ಯಕ್ಷರು ಸೂಚಿಸಿರುತ್ತಾರೆ.<br>**ಕ್ರಮ : ಸಹಾಯಕ ಅಭಿಯಂತರರು, (ವಿದ್ಯುತ್ ವಿಭಾಗ)** |
| 2 | ತೋಟಗಾರಿಕೆ | ತೋಟಗಾರಿಕೆ ಅಧೀಕ್ಷಕರು ಗೈರ ಹಾಜರಾಗಿದ್ದು, ರವರ ಪರವಾಗಿ ಸಭೆಗೆ ಹಾಜರಾಗಿದ್ದ ಸಿಬ್ಬಂದಿಯವರು, ಹಿಂದಿನ ಸಭೆಯಲ್ಲಿ ತಿಳಿಸಿರುವ ವಿಷಯಗಳ ಬಗ್ಗೆ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು ಹಾಗೂ 7ನೇ ಸೆಕ್ಟರ್‌ನಲ್ಲಿರುವ ಆದರ್ಶ ಉದ್ಯಾನವನ್ನು ನಿರ್ವಹಿಸಲು ಸದಸ್ಯರು ತಿಳಿಸಿದ್ದು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>**ಕ್ರಮ:- ತೋಟಗಾರಿಕೆ ಅಧೀಕ್ಷಕರು.** |
| 3 | ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಿಂದಿನ ಸಭೆಯಲ್ಲಿ ಚರ್ಚಿಸಲಾಗಿರುವ ವಿಷಯಗಳ ಬಗ್ಗೆ ತೆಗೆದುಕೊಂಡ ಕ್ರಮಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಕ್ರಮಕೈಗೊಳ್ಳಲಾಗಿದೆ ಎಂದು ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರು ತಿಳಿಸಿರುತ್ತಾರೆ. ~~ಮತ್ತು~~<br>ಕ್ರಮ:- ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 4 | ಬೆಸ್ಕಾಂ | ಹಿಂದಿನ ಸಭೆಯಲ್ಲಿ ಚರ್ಚಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಇಂದಿನ ಸಭೆಗೆ ಸಹಾಯಕ ಅಭಿಯಂತರರು ವಿದ್ಯುತ್ ಗೈರು ಹಾಜರಾಗಿರುತ್ತಾರೆ. ರವರ ಪರವಾಗಿ ಕಿರಿಯ ಅಭಿಯಂತರರು, ಬೆಸ್ಕಾಂ ರವರಿಗೆ ಪಾದಚಾರಿ ಮಾರ್ಗದಲ್ಲಿ ಪ್ಯಾನಲ್/ವಿದ್ಯುತ್ ಪರಿವರ್ತಕವನ್ನು ರಸ್ತೆ ಮಧ್ಯಭಾಗದಲ್ಲಿ ಇರಿಸಲಾಗಿದ್ದು, ಸಾರ್ವಜನಿಕ ಸಂಚಾರಕ್ಕೆ ಓಡಾಡಲು ತೊಂದರೆಯಾಗುತ್ತಿದೆಂದು ಸದಸ್ಯರು ತಿಳಿಸಿದ್ದು, ಕಿರಿಯ ಅಭಿಯಂತರರು, ಬೆಸ್ಕಾಂ ರವರು ಬಿ.ಬಿ.ಎಂ.ಪಿ ವತಿಯಿಂದ ಅನುಮತಿ ಪಡೆದುಕೊಂಡು ತಗಲುವ ವೆಚ್ಚವನ್ನು ಭರಿಸಿ ಪಾದಚಾರಿ ಮಾರ್ಗವನ್ನು ಉಪಯೋಗಿಸಿಕೊಳ್ಳಲಾಗುತ್ತಿದೆ ಎಂದು ತಿಳಿಸಿರುತ್ತಾರೆ.<br>• ವಾರ್ಡ್ ವ್ಯಾಪ್ತಿಯಲ್ಲಿ ಯು.ಜಿ.ಡಿ ಲೈನ್ ಅಗೆದಿದ್ದು, ಸಾರ್ವಜನಿಕರಿಗೆ ಓಡಾಡಲು ಕಷ್ಟಕರವಾಗುತ್ತಿದೆ ಎಂದು ಸದಸ್ಯರು ತಿಳಿಸಿರುತ್ತಾರೆ. ಈ ಬಗ್ಗೆ ಅಧ್ಯಕ್ಷರು ಕ್ರಮ ವಹಿಸಲು ಸೂಚಿಸಿದರು.<br>• ವಾರ್ಡ್ ವ್ಯಾಪ್ತಿಯಲ್ಲಿ ಬರುವ ವಿವಿಧ ಧಾರ್ಮಿಕ ದೇವಸ್ಥಾನಗಳಿಗೆ ವಿದ್ಯುತ್ ಸಂಪರ್ಕ ನೀಡಿದ್ದು, ಪ್ರತ್ಯೇಕ ದರಗಳನ್ನು ಸಂಗ್ರಹ ಮಾಡುತ್ತಿದ್ದು, ಎಲ್ಲಾ ದೇವಸ್ಥಾನಗಳಿಗೆ ಒಂದೇ ದರಗಳನ್ನು ಸಂಗ್ರಹಿಸಲು ಸದಸ್ಯರು ತಿಳಿಸಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿ ಕ್ರಮ ವಹಿಸಲು ಅಧ್ಯಕ್ಷರು ಸೂಚಿದರು.<br>**ಕ್ರಮ : ಕಿರಿಯ ಅಭಿಯಂತರರು (ಬೆಸ್ಕಾಂ)** |
| 5 | ಕಲ್ಯಾಣ ವಿಭಾಗ | ವಾರ್ಡ್ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗದಲ್ಲಿರು ಮಳಿಗಳಿಗೆ |

Scanned with Car

| | | |
|---|---|---|
| | | ರೂ 10,000.00 ಗಳನ್ನು ನೀಡಲು ಸದಸ್ಯರು ತಿಳಿಸಿದ್ದು, ಈ ಬಗ್ಗೆ P.M Seva Nidhi ಯಿಂದ ಪ್ರತಿ ಮಳಿಗೆಗಳಿಗೆ ರೂ. 10,000.00 ಗಳನ್ನು ನೀಡಲಾಗುತ್ತಿದ್ದ ಎಂದು ಸಂಬಂಧಪಟ್ಟ ಅಧಿಕಾರಿ ತಿಳಿಸಿರುತ್ತಾರೆ. ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು ಕ್ರಮ ವಹಿಸಲು ಸೂಚಿಸಿರುತ್ತಾರೆ.<br>**ಕಮ್ರ: ಕಲ್ಯಾಣಾಧಿಕಾರಿಗಳು** |
| 6 | ಎಸ್.ಡಬ್ಲ್ಯೂ.ಡಿ ವಿಭಾಗ | ಹಿಂದಿನ ಸಭೆಯಲ್ಲಿ ಚರ್ಚಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಚರಂಡಿಯಲ್ಲಿ ಹೂಳೆತ್ತಲು, ಶೋಲ್ಡರ್ ಡ್ರೈನ್ ಸ್ವಚ್ಛಗೊಳಿಸಲು ಹಾಗೂ ಕವರಿಂಗ್ ಸ್ಲ್ಯಾಬ್ ಅಳವಡಿಸುವಂತೆ ಸಭೆಯಲ್ಲಿ ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಎಸ್.ಡಬ್ಲ್ಯೂ.ಡಿ ಸ.ಕಾ.ಅ. ಮತ್ತು ಕಾರ್ಯಪಾಲಕ ಅಭಿಯಂತರರು, ಬೊಮ್ಮನಹಳ್ಳಿ ವಿಭಾಗ ರವರು ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳಲುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೃಹತ್ ಮಳೆ ನೀರು ಗಾಲುವೆ ವಿಭಾಗ)** |
| 7 | ಕಾಮಗಾರಿ ವಿಭಾಗ | ಹಿಂದಿನ ಸಭೆಯಲ್ಲಿ ಚರ್ಚಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಸ.ಅ. ರವರು ಚರಂಡಿಗಳಲ್ಲಿ ಹೋಳೇತ್ತಲು ಕ್ರಿಯಾಯೋಜನೆ ಸಿದ್ಧಪಡಿಸಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿರುತ್ತಾರೆ.<br>• ವಾರ್ಡ್ ವ್ಯಾಪ್ತಿಯ ಪರಂಗಿಪಾಳ್ಯದಲ್ಲಿ ಹೊಸದಾಗಿ ಚರಂಡಿ ಕಲ್ವರ್ಟ್ ಮತ್ತು ಡಾಂಬರೀಕರಣ ಕಾಮಗಾರಿ ನಿರ್ವಹಿಸಲು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಕ್ರಿಯಾಯೋಜನೆ ತಯಾರಿಸಿದ್ದು, ಕಾರ್ಯದೇಶ ನೀಡಿದ ನಂತರ ಕ್ರಮ ಕೈಗೊಳ್ಳಲಾಗುವುದೆಂದು ಸ.ಅ. ರವರು ತಿಳಿಸಿದರು.<br>• ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ವಹಿಸಲು ಅಧ್ಯಕ್ಷರು ತಿಳಿಸಿರುತ್ತಾರೆ.<br>• ವಾರ್ಡ್ ವ್ಯಾಪ್ತಿಯಲ್ಲಿ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ನಿರ್ವಹಿಸಲು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಅಧ್ಯಕ್ಷರು ರವರು ಸಂಬಂಧಪಟ್ಟ ಅಭಿಯಂತರರು ಕ್ರಮ ವಹಿಸಲು ಸೂಚಿಸಿರುತ್ತಾರೆ.<br>• ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕ ರಸ್ತೆಗೆ ಅಡ್ಡಲಾಗಿ ದೊಡ್ಡ ಗ್ರಾತದ ವಾಹನಗಳನ್ನು ಓಡಾಡದಂತೆ ಬ್ಯಾರಿಕೆಡ್ ಅಳವಡಿಸಿದ್ದು, ಈ ಬಗ್ಗೆ ಆರಕ್ಷಕ ನಿರೀಕ್ಷಕರು ಸಂಚಾರಿ ಪೋಲಿಸ್ ಠಾಣೆ ರವರಿಗೆ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>• ವಾರ್ಡ್ ವ್ಯಾಪ್ತಿಯ 9ನೇ ಮುಖ್ಯ ರಸ್ತೆಯಲ್ಲಿ ಕೂಲಿಕಾರ್ಮಿಕರು ಶೆಡ್ ಅಳವಡಿಸಿಕೊಂಡು, ಪಾದಚಾರಿ ಮಾರ್ಗದಲ್ಲಿ ಗಲೀಜು ಮಾಡುತ್ತಿದ್ದಾರೆ ಇದ್ದರಿಂದ ರಸ್ತೆಯಲ್ಲಿ ಓಡಾಡಲು ಕಷ್ಟಕರವಾಗುತ್ತಿದ್ದು, ಶೆಡ್‌ಗಳನ್ನು ತೆರವುಗೊಳಿಸಲು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ಅಭಿಯಂತರರಿಗೆ ಕ್ರಮ ವಹಿಸುಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>• 2020-21ನೇ ಸಾಲಿನ ಒಂಟಿ ಮನೆ ಯೋಜನೆಯಡಿಯಲ್ಲಿ ಅರ್ಜಿ ಸಲ್ಲಿಸಿರುವ ಅರ್ಹ ಫಲಾನುಭವಿಗಳಿಗೆ ಕಾಮಗಾರಿ ಸಂಕೇತ ಕಾರ್ಯದೇಶ ನೀಡಲು ಕಾರ್ಯಪಾಲಕ ಅಭಿಯಂತರರು, ರವರಿಗೆ ಸೂಚಿಸುತ್ತಾ ಈ ಬಗ್ಗೆ ಜಂಟಿ ಆಯುಕ್ತರು ಬೊಮ್ಮನಹಳ್ಳಿ ವಲಯ ರವರಿಂದ ಅನುಮೋದನೆ ಪಡೆಯಲು ಕ್ರಮ ವಹಿಸುವುದಾಗಿ ಸೂಚಿಸಿದರು.<br>**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಎಸ್.ಆರ್ ಉಪವಿಭಾಗ** |

Scanned with Car

ಅಂತಿಮವಾಗಿ ಮಾನ್ಯ ನೋಡಲ್ ಅಧಿಕಾರಿಗಳು, ವಾರ್ಡ್ ನಂ. 174 ಹಾಗೂ ಜಂಟಿ ಆಯುಕ್ತರು (ಮಹಾದೇವಪುರ) ವಲಯ ರವರು ಸಭೆಯಲ್ಲಿ ಚರ್ಚಿಸಲಾದ ಎಲ್ಲಾ ವಿಷಯಗಳ ಬಗ್ಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ತುರ್ತು ಕ್ರಮವಹಿಸಲು ಸೂಚಿಸಿದರು ಹಾಗೂ ಸಾರ್ವಜನಿಕರು ನೀಡಿರುವ ದೂರಿನ ಬಗ್ಗೆ ಅಗತ್ಯ ಕ್ರಮವಹಿಸುವುದಾಗಿ ತಿಳಿಸುತ್ತಾ ಸಭೆಯಲ್ಲಿ ಹಾಜರಿದ್ದ ಎಲ್ಲಾರಿಗೂ ವಂದನೆಗಳನ್ನು ಸಲ್ಲಿಸುವುದರ ಮೂಲಕ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ಸಹಾಯಕ ಅಭಿಯಂತರು
ಹೆಚ್.ಎಸ್.ಆರ್.ಬಡಾವಣೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡಲ್ ಅಧಿಕಾರಿ ವಾರ್ಡ್ ನಂ.174
ಹೆಚ್.ಎಸ್.ಆರ್.ಬಡಾವಣೆ ಹಾಗೂ
ಜಂಟಿ ಆಯುಕ್ತರು ಮಹದೇವಪುರ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned with Car